ಸೋಮವಾರ 12.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 118
Digital Varthe Kannada Daily
Volume 01 - Issue 118
Monday 12v.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ತಂದೆಯ ಅಕ್ರಮ ಸಂಬಂಧಕ್ಕೆ ದುರಂತ ಅಂತ್ಯ : ಮಗನಿಂದಲೇ ಕೊಲೆ





**ಹಾಸನ:** ಜನ್ಮ ನೀಡಿದ ತಂದೆಯನ್ನೇ ಮಗ ರಾಡ್‌ನಿಂದ ಹೊಡೆದು ಕೊಂದಿರುವ ಘಟನೆ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ಹಿರಿಸಾವೆ ಗ್ರಾಮದಲ್ಲಿ ಸಂಭವಿ ಸಿದ್ದು, ಇಡೀ ಗ್ರಾಮವೇ ಬೆಚ್ಚಿ ಬಿದ್ದಿದೆ.

ಕೊಲೆಯಾದ ವ್ಯಕ್ತಿಯನ್ನು 60 ವರ್ಷದ ಸತೀಶ್ ಎಂದು ಗುರುತಿಸಲಾಗಿದೆ. ಹತ್ಯೆಗೈದ ಆರೋಪಿ ಸತೀಶ್ ಅವರ ಪುತ್ರ 28 ವರ್ಷದ ರಂಜಿತ್. ಹಿರಿಸಾವೆ ಗ್ರಾಮದ ನಿವಾಸಿಯಾಗಿದ್ದ ಸತೀಶ್ ಅವರು ತಮ್ಮ ಕುಟುಂಬದ ಬಗ್ಗೆ ನಿರ್ಲಕ್ಷ್ಯ ವಹಿಸಿದ್ದರು ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ರಂಜಿರ್‌ನ ತಂದೆ ಸತೀಶ್ ಅಕ್ರಮ ಸಂಬಂಧವನ್ನು ಹೊಂದಿದ್ದರು. ಇದು ಈ ಕೊಲೆಗೆ ಪ್ರಮುಖ ಕಾರಣವೆಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಸತೀಶ್ ಅವರ ನಡವಳಿಕೆಯಿಂದ ಬೇಸತ್ತಿದ್ದ ಪತ್ನಿ ನಿರ್ಮಲ ಹಾಗೂ ಮಗ ರಂಜಿತ್, ಮೈಸೂರು ಜಿಲ್ಲೆಯ ಕೆ.ಆರ್. ನಗರದಲ್ಲಿ ಪ್ರತ್ಯೇಕವಾಗಿ ವಾಸವಿದ್ದರು. ತಂದೆಯ ಹಾದಿ ತಪ್ಪಿದ ವರ್ತನೆ ಮತ್ತು ಅಕ್ರಮ ಸಂಬಂಧದ ವಿಚಾರವಾಗಿ ರಂಜಿತ್ ಪದೇ ಪದೇ ತಂದೆಯನ್ನು ಪ್ರಶ್ನಿಸುತ್ತಿದ್ದನು. ಈ ಸಂಬಂಧ ತಂದೆ-ಮಗನ ನಡುವೆ ಆಗಾಗ್ಗೆ ತೀವ್ರ ವಾಗ್ವಾದಗಳು ನಡೆಯುತ್ತಿದ್ದವು. ಶನಿವಾರ ರಾತ್ರಿ ಸತೀಶ್ ಮತ್ತು ರಂಜಿತ್ ನಡುವೆ ಮತ್ತೊಮ್ಮೆ ಇದೇ ವಿಚಾರಕ್ಕೆ ದೊಡ್ಡ ಜಗಳ ಶುರುವಾಗಿದೆ. ಮಾತಿಗೆ ಮಾತು ಬೆಳೆದು ಇಬ್ಬರ ನಡುವೆ ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿದೆ. ಜಗಳ ತಾರಕಕ್ಕೇರಿದಾಗ ಆಕ್ರೋಶಗೊಂಡ ರಂಜಿತ್, ಮನೆಯಲ್ಲಿದ್ದ ಸ್ಟೀಲ್ ರಾಡ್ ತೆಗೆದುಕೊಂಡು ತಂದೆಯ ತಲೆಗೆ ಬಲವಾಗಿ ಹೊಡೆದಿದ್ದಾನೆ. ತೀವ್ರ ರಕ್ತಸ್ರಾವವಾದ ಕಾರಣ ಸತೀಶ್ ಸ್ಥಳದಲ್ಲೇ ಪ್ರಾಣ ಬಿಟ್ಟಿದ್ದಾರೆ.

ಹತ್ಯೆಯ ಸುದ್ದಿ ತಿಳಿಯುತ್ತಿದ್ದಂತೆಯೇ ಹಿರಿಸಾವೆ ಠಾಣೆಯ ಪೊಲೀಸರು ಘಟನಾ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದ್ದು, ಆರೋಪಿ ರಂಜಿತ್‌ನನ್ನು ವಶಕ್ಕೆ ಪಡೆಯಲಾಗಿದೆ ಎನ್ನಲಾಗಿದೆ. ಹಿರಿಸಾವೆ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

## ಪ್ರೀತಿ ಹೆಸರಲ್ಲಿ JDS ಮುಖಂಡೆ ಪುತ್ರನಿಂದ ಕಿರುಕುಳ – ಯುವತಿ ಆತ್ಮಹತ್ಯೆ





**ಕಾರವಾರ:** ಪ್ರೀತಿ ಹೆಸರಲ್ಲಿ ಜೆಡಿಎಸ್ ಮುಖಂಡೆಯ ಪುತ್ರ ನೀಡಿದ ನಿರಂತರ ಕಿರುಕುಳವನ್ನು ಸಹಿಸಲಾರದೆ ಯುವತಿ ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ಉತ್ತರ ಕನ್ನಡ ಜಿಲ್ಲೆಯ ಕಾರವಾರದಲ್ಲಿ ನಡೆದಿದೆ.

ಕಾರವಾರ ತಾಲ್ಲೂಕಿನ ಕದ್ರಾ ಕೆಪಿಸಿ ಕಾಲೋನಿಯ ನಿವಾಸಿ ರಿಶೇಲ್ ಡಿಸೋಜಾ (20) ಆತ್ಮಹತ್ಯೆ ಮಾಡಿಕೊಂಡ ಯುವತಿ ಎಂದು ಗುರುತಿಸಲಾಗಿದೆ. ಜೆಡಿಎಸ್ ಮುಖಂಡೆಯ ಪುತ್ರ ಚಿರಾಗ್ ಎಂಬಾತ ಪ್ರೀತಿ ಹೆಸರಲ್ಲಿ ರಿಶೇಲ್‌ಗೆ ಮಾನಸಿಕ ಹಾಗೂ ವಾಚಿಕ ಕಿರುಕುಳ ನೀಡುತ್ತಿದ್ದನೆಂಬ ಆರೋಪ ಕೇಳಿಬಂದಿದೆ.

ಈ ಸಂಬಂಧ ಮೃತ ಯುವತಿಯ ತಂದೆ ಕ್ರಿಸ್ತೋದ್ ಡಿಸೋಜಾ ಅವರು ಕಾರವಾರ ತಾಲ್ಲೂಕಿನ ಕದ್ರಾ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ. ದೂರಿನಲ್ಲಿ ತಿಳಿಸಿದಂತೆ, ಚಿರಾಗ್ ಮತ್ತು ರಿಶೇಲ್ ಇಬ್ಬರೂ ಪರಿಚಯಸ್ಥರಾಗಿದ್ದರು. ಕಳೆದ ಕೆಲವು ದಿನಗಳಿಂದ ಚಿರಾಗ್ ಆಗಾಗ ರಿಶೇಲ್ ಅವರ ಮನೆಯ ಬಳಿ ಸುತ್ತಾಡುತ್ತಿದ್ದು, ತನ್ನನ್ನು ಪ್ರೀತಿಸುವಂತೆ ಒತ್ತಡ ಹೇರುತ್ತಿದ್ದ ಎನ್ನಲಾಗಿದೆ.

ಆದರೆ ರಿಶೇಲ್ ಆತನ ಪ್ರೀತಿಯನ್ನು ಸ್ಪಷ್ಟವಾಗಿ ನಿರಾಕರಿಸಿದ್ದಳು. ಇದರಿಂದ ಕೋಪಗೊಂಡ ಚಿರಾಗ್ ಫೋನ್ ಕರೆಗಳ ಮೂಲಕವೂ ರಿಶೇಲ್‌ಗೆ ಕಿರುಕುಳ ನೀಡುತ್ತಿದ್ದ. ನೀನು ಬದುಕಿದ್ದು ಯಾವುದೇ ಪ್ರಯೋಜನವಿಲ್ಲ, ಹೇಗಾದರೂ ಸತ್ತುಹೋಗು, ಬದುಕಿರುವುದಕ್ಕಿಂತ ಸತ್ತರೆ ಒಳ್ಳೆಯದು ಎಂದು ಅವಮಾನಕಾರಿ ಮಾತುಗಳಿಂದ ಮಾನಸಿಕ ಹಿಂಸೆ ನೀಡಿದ್ದಾನೆ ಎಂದು ತಂದೆ ಆರೋಪಿಸಿದ್ದಾರೆ.

ಚಿರಾಗ್‌ನ ಈ ಮಾತುಗಳು ಹಾಗೂ ನಿರಂತರ ಕಿರುಕುಳದಿಂದ ಮನನೊಂದು ರಿಶೇಲ್ ಶುಕ್ರವಾರ (ಜನವರಿ 9) ಮಧ್ಯಾಹ್ನ ಸುಮಾರು 2 ಗಂಟೆ ಸುಮಾರಿಗೆ ಮನೆಯಲ್ಲೇ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಸದ್ಯ ಈ ಪ್ರಕರಣಕ್ಕೆ ಸಂಬಂಧಿಸಿ ಕದ್ರಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಘಟನೆ ಕಾರವಾರದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದ್ದು, ಯುವತಿಯ ಸಾವಿಗೆ ನ್ಯಾಯ ದೊರಕಿಸಬೇಕೆಂಬ ಆಗ್ರಹ ಕೇಳಿಬರುತ್ತಿದೆ.

## ಕೊಲೆ ಪ್ರಕರಣದಲ್ಲಿ ಸಾಕ್ಷಿದಾರಳನ್ನು ಕೊಂದ ಆರೋಪಿಗಳು



**ನವದೆಹಲಿ:** ದೆಹಲಿಯಲ್ಲಿ ಬೆಳ್ಳಂಬೆಳಗ್ಗೆ ರಸ್ತೆಯಲ್ಲೇ ಮಹಿಳೆಯೊಬ್ಬಳನ್ನು ಗುಂಡಿಕ್ಕಿ ಹತ್ಯೆಮಾಡಲಾಗಿದ್ದು, ಜನರು ಬೆಚ್ಚಿ ಬಿದ್ದಿದ್ದಾರೆ. ದೆಹಲಿಯ ಶಾಲಿಮಾರ್ ಬಾಗ್‌ನಲ್ಲಿ 44ವರ್ಷದ ಮಹಿಳೆಯನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. 2023ರಲ್ಲಿ ಆ ಮಹಿಳೆಯ ಪತಿಯನ್ನು ದುಷ್ಕರ್ಮಿಗಳು ಹತ್ಯೆ ಮಾಡಿದ್ದರು. ಅದಕ್ಕೆ ಆ ಮಹಿಳೆಯೇ ಸಾಕ್ಷಿಯಾಗಿದ್ದರು, ಇದೀಗ ಸಾಕ್ಷ್ಯ ನಾಶ ಮಾಡಲು ಆರೋಪಿಗಳು ಆಕೆಯನ್ನೂ ಹತ್ಯೆ ಮಾಡಿದ್ದಾರೆ ಎನ್ನಲಾಗಿದೆ.

ಮೃತರನ್ನು ಶಾಲಿಮಾರ್ ಬಾಗ್ ನಿವಾಸಿ ರಚನಾ ಯಾದವ್, ಪೊಲೀಸರ ಪ್ರಕಾರ, ಅವರ ತಲೆಗೆ ಗುಂಡು ಹಾರಿಸಿದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.ರಚನಾ ಮೂಲತಃ ವಾಯುವ್ಯ ದೆಹಲಿಯ ಭಲ್ಸ್ವಾದವರು. 2023ರಲ್ಲಿ ರಚನಾ ಪತಿ ವಿಜೇಂದ್ರ ಯಾದವ್ ಅವರನ್ನು ಗುಂಡಿಕ್ಕಿ ಕೊಲ್ಲಲಾಗಿತ್ತು, ಆ ಕೊಲೆ ಪ್ರಕರಣವು ಪ್ರಸ್ತುತ ವಿಚಾರಣೆಯಲ್ಲಿದೆ. ವಿಜೇಂದ್ರ ಯಾದವ್ ಅವರನ್ನು ಹಳೆಯ ಯಾವುದೋ ದ್ವೇಷದ ಕಾರಣ ಕೊಲೆ ಮಾಡಲಾಗಿತ್ತು.

ಭರತ್ ಯಾದವ್ ಮತ್ತು ಇತರ ಐವರನ್ನು ಆರೋಪಿಗಳನ್ನಾಗಿ ಹೆಸರಿಸಲಾಗಿದೆ. ಐದು ಆರೋಪಿಗಳನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ. ಪ್ರಮುಖ ಆರೋಪಿ ಭರತ್ ಯಾದವ್ ಇನ್ನೂ ತಲೆಮರೆಸಿಕೊಂಡಿದ್ದು, ಆತನನ್ನು ಅಪರಾಧಿ ಎಂದು ಘೋಷಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಚನಾ ಅವರ ಪತಿಯ ಕೊಲೆ ಪ್ರಕರಣದಲ್ಲಿ ಪ್ರಮುಖ ಸಾಕ್ಷಿಯಾಗಿದ್ದರು ಮತ್ತು ಅವರ ಸಾಕ್ಷ್ಯವನ್ನು ಪ್ರಾಸಿಕ್ಯೂಷನ್‌ಗೆ ಪ್ರಮುಖವೆಂದು ಪರಿಗಣಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಕರಣವನ್ನು ದುರ್ಬಲಗೊಳಿಸುವ ಮತ್ತು ಇತರ ಸಾಕ್ಷಿಗಳನ್ನು ಬೆದರಿಸುವ ಗುರಿಯನ್ನು ಆರೋಪಿಗಳು ಹೊಂದಿರಬಹುದು ಎಂದು ಹೇಳಲಾಗಿದೆ.

ರಚನಾ ಯಾದವ್ ಕೊಲೆ ಪ್ರಕರಣದ ಸಿಸಿಟಿವಿ ದೃಶ್ಯಾವಳಿಗಳು ಹೊರಬಂದಿದ್ದು, ಅದರಲ್ಲಿ ಗುಂಡು ಹಾರಿಸಿದ ಆರೋಪಿಗಳು ಸ್ಪಷ್ಟವಾಗಿ ಕಾಣುತ್ತಿದ್ದಾರೆ. ಹಲ್ಲೆಕೋರನ ಸಹಚರನು ದೆಹಲಿ ನೋಂದಣಿ ಸಂಖ್ಯೆಯನ್ನು ಹೊಂದಿರುವ ಸ್ಪೋರ್ಟ್ಸ್ ಬೈಕ್‌ನಲ್ಲಿ ಕಾಯುತ್ತಿದ್ದರು, ಇದು ವೇಗವಾಗಿ ತಪ್ಪಿಸಿಕೊಳ್ಳಲು ಅನುಕೂಲ ಮಾಡಿಕೊಟ್ಟಿತು ಎಂದು ಪೊಲೀಸರು ತಿಳಿಸಿದ್ದಾರೆ.

ಶಾಲಿಮಾರ್ ಬಾಗ್ ಪೊಲೀಸ್ ಠಾಣೆಗೆ ಬೆಳಗ್ಗೆ 10.59 ರ ಸುಮಾರಿಗೆ ಮಹಿಳೆಯೊಬ್ಬರ ಮೇಲೆ ಗುಂಡು ಹಾರಿಸಲಾಗಿದೆ ಎಂದು ಪಿಸಿಆರ್ ಕರೆ ಬಂದಿತು ಎಂದು ಪೊಲೀಸರು ತಿಳಿಸಿದ್ದಾರೆ. ಸ್ಥಳೀಯ ಪೊಲೀಸ್ ತಂಡಗಳು ಸ್ಥಳಕ್ಕೆ ಧಾವಿಸಿ ನೋಡಿದಾಗ ರಚನಾ ರಕ್ತದ ಮಡುವಿನಲ್ಲಿ ರಸ್ತೆಯಲ್ಲಿ ಬಿದ್ದಿರುವುದನ್ನು ಕಂಡು ಕೂಡಲೇ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಆದರೆ ಬರುವಾಗಲೇ ಅವರು ಮೃತಪಟ್ಟಿದ್ದರು ಎಂದು ವೈದ್ಯರು ತಿಳಿಸಿದ್ದಾರೆ. ತನ್ನ ತಂದೆಯ ಕೊಲೆ ಪ್ರಕರಣದಲ್ಲಿ ಸಾಕ್ಷಿಯಾಗಿ ದೃಢವಾಗಿ ನಿಂತಿದ್ದರಿಂದ ತನ್ನ ತಾಯಿಯನ್ನು ಕೊಂದಿದ್ದಾರೆ ಎಂದು ಮಗಳು ಕನಿಕಾ ಹೇಳಿದ್ದಾಳೆ.

## ಇನ್ನೋವಾ ಕಾರ್ ಗೆ ಲಾರಿ ಡಿಕ್ಕಿ ಇಬ್ಬರು ಸಾವು



**ಚಿತ್ರದುರ್ಗ:** ಜಿಲ್ಲೆಯಲ್ಲಿ ಸಂಭವಿಸಿದ ಎರಡು ಭೀಕರ ರಸ್ತೆ ಅಪಘಾತಗಳು ಆರು ಮಂದಿಯ ಪ್ರಾಣ ಬಲಿ ಪಡೆದಿದ್ದು, ಸಾರ್ವಜನಿಕರಲ್ಲಿ ತೀವ್ರ ಆಘಾತ ಮತ್ತು ಆತಂಕ ಮೂಡಿಸಿದೆ.

**ಇನ್ನೋವಾ-ಲಾರಿ ಡಿಕ್ಕಿ- DySP ತಾಯಿ ಸೇರಿ ಇಬ್ಬರು ಸ್ಥಳದಲ್ಲೇ ಸಾವು:**ಚಿತ್ರದುರ್ಗ ತಾಲ್ಲೂಕಿನ ತಮಟಕಲ್ಲು ಗ್ರಾಮದ ಸಮೀಪ ಲಾರಿಗೆ ಇನ್ನೋವಾ ಕಾರು ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿದ್ದ ಇಬ್ಬರು ಸ್ಥಳದಲ್ಲೇ ಮೃತಪಟ್ಟ ಘಟನೆ ನಡೆದಿದೆ. ಮಹಾರಾಷ್ಟ್ರದ ಕೊಲ್ಹಾಪುರ ಜಿಲ್ಲೆಯ DySP ವೈಷ್ಣವಿ ಅವರು ಪ್ರಯಾಣಿಸುತ್ತಿದ್ದ ಇನ್ನೋವಾ ಕಾರು ಅಪಘಾತಕ್ಕೀಡಾಗಿದ್ದು, ಈ ದುರ್ಘಟನೆಯಲ್ಲಿ ಅವರ ತಾಯಿ ಕಮಲ (65) ಹಾಗೂ ಕಾರು ಚಾಲಕ ರಾಕೇಶ್ (40) ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಅಪಘಾತದಲ್ಲಿ DySP ವೈಷ್ಣವಿ ಸೇರಿ ಇನ್ನೂ ಮೂವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಚಿತ್ರದುರ್ಗದ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಪ್ರಾಥಮಿಕ ಮಾಹಿತಿಯಂತೆ, DySP ವೈಷ್ಣವಿ ಅವರು ತಾಯಿ ಜೊತೆ ತಮಿಳುನಾಡಿಗೆ ಪ್ರವಾಸಕ್ಕೆ ತೆರಳಿದ್ದು, ಅಲ್ಲಿಂದ ಹಿಂದಿರುಗಿ ಕೊಲ್ಹಾಪುರಕ್ಕೆ ಪ್ರಯಾಣಿಸುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ.

ಘಟನಾ ಸ್ಥಳಕ್ಕೆ ಸಿಪಿಐ ಬಾಲಚಂದ್ರ ನಾಯ್ಕ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ. ಅಪಘಾತಕ್ಕೆ ನಿಖರ ಕಾರಣ ಪತ್ತೆ ಹಚ್ಚಲು ತನಿಖೆ ಮುಂದುವರಿದಿದೆ.

## ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಪುಲ ಅವಕಾಶಗಳಿವೆ



**ಮಂಗಳೂರು:** ಪ್ರವಾಸೋದ್ಯಮದಲ್ಲಿ ಹೂಡಿಕೆ ಮಾಡುವವರಿಗೆ ನಮ್ಮ ಸರ್ಕಾರ ಎಲ್ಲಾ ಬೆಂಬಲ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮಂಗಳೂರಿನ ಹೋಟೆಲ್ ಅವತಾರ್ ನಲ್ಲಿ ಆಯೋಜಿಸಲಾಗಿದ್ದ ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶ -2026 ಕಾರ್ಯಕ್ರಮ ದಲ್ಲಿ ಭಾಗವಹಿಸಿ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರವಾಸೋದ್ಯಮ ಸಮಾವೇಶ -2026 ದಲ್ಲಿ ಬಂಡವಾಳ ಹೂಡಿಕೆ ಮಾಡಲು ಲೆಟರ್ ಆಫ್ ಇಂಟೆಂಟ್ ಗೆ ಅನೇಕರು ಸಹಿ ಹಾಕಿದ್ದು, ಪ್ರವಾಸೋದ್ಯಮ ಅಭಿವೃದ್ಧಿಗೆ ಮುಂದಾಗುವವರಿಗೆ ಸರ್ಕಾರ ನೆರವಾಗಲಿದೆ. ದಕ್ಷಿಣ ಕನ್ನಡ ಉಡುಪಿ, ಉತ್ತರ ಕನ್ನಡ ಜಿಲ್ಲೆಗಳು ಪ್ರವಾಸೋದ್ಯಮಕ್ಕೆ ಹೆಚ್ಚು ಅವಕಾಶಗಳಿರುವ ಜಿಲ್ಲೆಗಳು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಪ್ರವಾಸೋದ್ಯಮ ನೀತಿ ರೂಪಿಸಿದೆ. ಕರ್ನಾಟಕದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಬೇಕಾದ ಅನೇಕ ಸ್ಥಳಗಳಲ್ಲಿದ್ದು, ವಿಶೇಷವಾಗಿ ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಪುಲ ಅವಕಾಶಗಳಿವೆ ಎಂದರು. 2024 ರಿಂದ 29 ರವರಿಗೆ ಐದು ವರ್ಷಗಳ ಪ್ರವಾಸೋದ್ಯಮ ನೀತಿ ಜಾರಿಗೆ ತರಲಾಗಿದೆ ಎಂದರು.

ಸುಮಾರು 320 ಕಿಮೀ ಕರಾವಳಿ ಪ್ರದೇಶವಿದ್ದರೂ, ಇಲ್ಲಿಯವರೆಗೆ ಅದನ್ನು ಪ್ರವಾಸೋದ್ಯಮಕ್ಕೆ ಸೂಕ್ತವಾಗಿ ಬಳಸಿಕೊಂಡಿಲ್ಲ. ಜಾಗತಿಕವಾಗಿ ಗುರುತಿಸಲ್ಪಟ್ಟ ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಆಸಕ್ತಿ ವಹಿಸಿದೆ ಎಂದರು .

**ತೆರಿಗೆ ನೀಡುವುದರಲ್ಲಿ ಕರಾವಳಿಯ ಕೊಡುಗೆ ಹಿರಿದು:**ಈ ಭಾಗದಲ್ಲಿ ಬ್ಯಾಂಕಿಂಗ್, ಶಿಕ್ಷಣ ಮತ್ತು ಆರೋಗ್ಯಕ್ಕೆ ವಿಶೇಷವಾಗಿ ಆದ್ಯತೆ ನೀಡಿ ಅಭಿವೃದ್ಧಿಯಾಗಿದೆ. ಕರಾವಳಿಯ ಸರಾಸರಿ ಸಾಕ್ಷರತಾ ಪ್ರಮಾಣ 2011 ರಲ್ಲಿ 88.56 % ಇತ್ತು. ತೆರಿಗೆ ಕೊಡುವುದರಲ್ಲಿ ನಮ್ಮ ರಾಜ್ಯ ಮುಂದಿದೆ. ಜಿ ಎಸ್.ಟಿ ಸಂಗ್ರಹಣೆಯಲ್ಲಿ ಮಹಾರಾಷ್ಟ್ರದ ನಂತರದ ಸ್ಥಾನದಲ್ಲಿದ್ದು, ಇದರಲ್ಲಿ ಕರಾವಳಿ ಜಿಲ್ಲೆಗಳ ಪಾತ್ರ ಹಿರಿದಿದೆ ಎಂದರು. ಬೆಂಗಳೂರು ಬಿಟ್ಟರೆ ಮಂಗಳೂರು ಹೆಚ್ಚಿನ ಕೊಡುಗೆ ನೀಡುತ್ತಿದೆ ಎಂದರು. ಪ್ರವಾಸೋದ್ಯಮ ಅಭಿವೃದ್ಧಿ ಯಾದರೆ ಮಹಾರಾಷ್ಟ್ರವನ್ನು ಹಿಂದಿಕ್ಕುವ ಅವಕಾಶ ನಮಗಿದೆ ಎಂದರು.

**ಸ್ಥಳೀಯವಾಗಿ ಉದ್ದಿಮೆ ಪ್ರಾರಂಭಿಸಿ:**ಮಂಗಳೂರಿಗೆ ಓದಲೆಂದು ದೇಶವಿದೇಶಗಳಿಂದ ಬರುತ್ತಾರೆ. ಆದರೆ ಇಲ್ಲಿನ ಜನ ಅರಬ್ ದೇಶಗಳಿಗೆ ಕೆಲಸ ಅರಸಿಕೊಂಡು ಹೋಗುವ ಪರಿಸ್ಥಿತಿ ವಿಷಾದನೀಯ. ಇಲ್ಲೇ ಉಳಿದುಕೊಂಡು ದುಡಿಮೆ ಮಾಡುವ ಪ್ರಯತ್ನ ಮಾಡುವುದು ಅವಶ್ಯ ಎಂದರು.

**ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಪುಲ ಅವಕಾಶ:**ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಸಾಧ್ಯವಿದೆ.

ಮಂಗಳೂರಿನಲ್ಲಿ ಪಂಚತಾರ ಹೋಟೆಲ್ ಸ್ಥಾಪಿಸಲು ಪ್ರಕಾಶ್ ಶೆಟ್ಟರು ಮುಂದಾಗಿರುವುದು ಶ್ಲಾಘನೀಯ ಎಂದರು.

**ಪ್ರವಾಸೋದ್ಯಮ ಬೆಳೆಯಲು ಕಾನೂನು ಸುವ್ಯವಸ್ಥೆ ಉತ್ತಮವಾಗಿರಬೇಕು:** ಪ್ರವಾಸೋದ್ಯಮ ಬೆಳೆಯಲು ಕಾನೂನು ಸುವ್ಯವಸ್ಥೆ ಉತ್ತಮವಾಗಿರಬೇಕು. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿಯ ವಾತಾವರಣ ನಿರ್ಮಾಣವಾಗಿರುವುದು ಸ್ವಾಗತಾರ್ಹ ಎಂದರು. ಧರ್ಮ , ಜಾತಿಯ ಹೆಸರಿನಲ್ಲಿ ಸಮಾಜ ಒಡೆಯುವ ಕೆಲಸವನ್ನು ಮಾಡಬಾರದು. ಒಂದು ಧರ್ಮದ ಮೇಲೆ ಮತ್ತೊಂದು ಧರ್ಮವನ್ನು ಎತ್ತಿ ಕಟ್ಟುವುದರಿಂದ ದೇಶಭಕ್ತಿ ಬರುವುದಿಲ್ಲ. ದೇಶದಲ್ಲಿರುವ ಎಲ್ಲಾ ಧರ್ಮಗಳು ಪ್ರೀತಿಯನ್ನೇ ಸಾರುತ್ತವೆಯೇ ಹೊರತು ದ್ವೇಷ ಸಾರುವುದಿಲ್ಲ. ಯಾರೂ ಕಾನೂನು ಕೈಗೆತ್ತಿಕೊಳ್ಳಬಾರದು. ಕುವೆಂಪು ಅವರು ಹೇಳಿದಂತೆ ಸರ್ವ ಜನಾಂಗದ ಶಾಂತಿಯ ತೋಟವಾಗಬೇಕು ಎಂದರು.

**ಬಂಡವಾಳ ಹೂಡಿಕೆಗೆ, ಆಸಕ್ತಿ ಅಗತ್ಯ:**ಪ್ರವಾಸೋದ್ಯಮದ ಬಗ್ಗೆ ಮಾಹಿತಿ ನೀಡುವ ಕೆಲಸವನ್ನು ಎಲ್ಲಾ ಮಾಧ್ಯಮಗಳು ಮಾಡಬೇಕು ಎಂದ ಮುಖ್ಯಮಂತ್ರಿಗಳು ದಕ್ಷಿಣ ಕನ್ನಡದ ಜನ ಸಾಹಸ ಪ್ರವೃತ್ತಿಯಿರುವವರು. ಸ್ಥಳೀಯವಾಗಿ ಉದ್ಯಮಗಳನ್ನು ಸ್ಥಾಪಿಸಬೇಕು ಎಂದು ಕರೆ ನೀಡಿದರು. ನಮ್ಮಲ್ಲಿ ಯಾವುದೇ ಕೊರತೆಗಳಿಲ್ಲ, ಬಂಡವಾಳ ಹೂಡಿಕೆಗೆ, ಆಸಕ್ತಿ ಅಗತ್ಯವಿದೆ ಎಂದು ತಿಳಿಸಿದರು.

ವಿಧಾನಸಭಾಧ್ಯಕ್ಷ ಯು. ಟಿ.ಖಾದರ್, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ , ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಸಚಿವರಾದ ಹೆಚ್. ಕೆ ಪಾಟೀಲ್, ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ಶಾಸಕರಾದ ಸುರೇಶ್ ಶೆಟ್ಟಿ, ಸತೀಶ್ ಸೈಲ್, ಭೀಮಣ್ಣ ನಾಯಕ್, ಅಶೋಕ್ ರೈ, ರಾಜೇಗೌಡ, ಐವಾನ್ ಡಿಸೋಜಾ, ಮಂಜುನಾಥ್ ಭಂಡಾರಿ, ಮಾಜಿ ಸಚಿವ ರಾಮನಾಥ್ ರೈ , ವಿನಯ್ ಕುಮಾರ್ ಸೊರಕೆ ಮೊದಲಾದವರು ಉಪಸ್ಥಿತರಿದ್ದರು.

## ರಸ್ತೆ ಅಪಘಾತದಲ್ಲಿ ನಾಲ್ವರು ದಾರುಣ ಸಾವು




**ಹಿಂಡಸಕಟ್ಟೆ ಬಳಿ ಭೀಕರ ಮುಖಾಮುಖಿ ಡಿಕ್ಕಿ: ನಾಲ್ವರು ಯುವಕರು ದುರ್ಮರಣ**

ಇನ್ನೊಂದು ದುರ್ಘಟನೆ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನಲ್ಲಿ ನಿನ್ನೆ ರಾತ್ರಿ ಸಂಭವಿಸಿದೆ. ಹಿರಿಯೂರು ತಾಲ್ಲೂಕಿನ ಹಿಂಡಸಕಟ್ಟೆ ಗ್ರಾಮದ ಸಮೀಪ ಬೀದರ್-ಶ್ರೀರಂಗಪಟ್ಟಣ ರಾಜ್ಯ ಹೆದ್ದಾರಿ 150ಎ ಮೇಲೆ ವೇಗವಾಗಿ ಬಂದ ಕ್ಯಾಂಟರ್ ಲಾರಿ ಹಾಗೂ ಸ್ವಿಫ್ಟ್ ಕಾರಿನ ನಡುವೆ ಭೀಕರ ಮುಖಾಮುಖಿ ಡಿಕ್ಕಿಯಾಗಿದೆ.

ಡಿಕ್ಕಿಯ ರಭಸಕ್ಕೆ ಸ್ವಿಫ್ಟ್ ಕಾರು ಸಂಪೂರ್ಣವಾಗಿ ನಜ್ಜುಗುಜ್ಜಾಗಿ, ಅವಶೇಷಗಳು ರಸ್ತೆಯಾದ್ಯಂತ ಹರಡಿಕೊಂಡಿದ್ದವು. ಕಾರಿನಲ್ಲಿದ್ದ ನಾಲ್ವರು ಯುವಕರು ತೀವ್ರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮೃತಪಟ್ಟವರನ್ನು ಹಿರಿಯೂರು ತಾಲ್ಲೂಕಿನ ನಂಜಯ್ಯನಕೊಟ್ಟಿಗೆ ನಿವಾಸಿಗಳಾದ ವಿಶ್ವನಾಥ್ (22), ನಂಜುಂಡಿ (23), ರಾಹುಲ್ (23) ಮತ್ತು ಯಶ್ವಂತ್ (22) ಎಂದು ಗುರುತಿಸಲಾಗಿದೆ. ಈ ದುರ್ಘಟನೆಯಿಂದ ಮೃತರ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದ್ದು, ಗ್ರಾಮದಲ್ಲಿ ಶೋಕ ಮಡುಗಟ್ಟಿದೆ.

**ಅಪಘಾತ ಸಂಭವಿಸಿದ ರೀತಿಯ ವಿವರ:**ಮೃತ ಯುವಕರು ಹುಳಿಯಾರಿನಿಂದ ಹಿರಿಯೂರು ಕಡೆಗೆ ತಮ್ಮ ಸ್ವಿಫ್ಟ್ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ವೇಳೆ, ಎದುರು ದಿಕ್ಕಿನಿಂದ ಬಂದ ಕ್ಯಾಂಟರ್ ಲಾರಿ ಡಿಕ್ಕಿ ಹೊಡೆದಿದೆ. ಅಪಘಾತದ ವೇಳೆ ಕಾರಿನಲ್ಲಿದ್ದವರು ರಸ್ತೆಗೆ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದರು ಎನ್ನಲಾಗಿದೆ. ತಕ್ಷಣ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

**ಪೊಲೀಸ್ ಪರಿಶೀಲನೆ ಮತ್ತು ತನಿಖೆ:**ಸುದ್ದಿ ತಿಳಿದ ತಕ್ಷಣ ಹಿರಿಯೂರು ಗ್ರಾಮಾಂತರ ಠಾಣೆಯ ಸಿಪಿಐ ಆನಂದ್ ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹಗಳನ್ನು ಕಾರಿನಿಂದ ಹೊರತೆಗೆದು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಅಪಘಾತಕ್ಕೆ ಅತಿವೇಗ ಅಥವಾ ಚಾಲಕರ ಅಜಾಗರೂಕತೆ ಕಾರಣವಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದ್ದು, ಈ ಸಂಬಂಧ ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಹೆದ್ದಾರಿ ಸುರಕ್ಷತೆ ಬಗ್ಗೆ ಆತಂಕ:**ಬೀದರ್-ಶ್ರೀರಂಗಪಟ್ಟಣ ರಾಜ್ಯ ಹೆದ್ದಾರಿಯಲ್ಲಿ ಇತ್ತೀಚಿನ ದಿನಗಳಲ್ಲಿ ಅಪಘಾತಗಳ ಸಂಖ್ಯೆ ಹೆಚ್ಚುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ವಾಹನ ಸವಾರರು ಸಂಚಾರಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅತಿವೇಗ ಹಾಗೂ ಅಜಾಗರೂಕ ಚಾಲನೆ ತಪ್ಪಿಸಬೇಕು ಎಂದು ಪೊಲೀಸರು ಮನವಿ ಮಾಡಿದ್ದಾರೆ. ನಿಯಮ ಉಲ್ಲಂಘನೆ ಹಾಗೂ ನಿರ್ಲಕ್ಷ್ಯವೇ ಅಮಾಯಕ ಜೀವಗಳ ನಷ್ಟಕ್ಕೆ ಕಾರಣವಾಗುತ್ತಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದ್ದಾರೆ.

## ರಾಮ ಮಂದಿರದಲ್ಲಿ ನಮಾಜ್ ಮಾಡಲು ಯತ್ನಿಸಿದ ವ್ಯಕ್ತಿ ಅರೆಸ್ಟ್





**ಅಯೋಧ್ಯೆ** :ಅಯೋಧ್ಯೆಯ ರಾಮ ಮಂದಿರದಲ್ಲಿ ಇಂದು ಬೆಳಗ್ಗೆ ಭದ್ರತಾ ಲೋಪದ ಪ್ರಕರಣವೊಂದು ಬೆಳಕಿಗೆ ಬಂದಿದೆ. ರಾಮ ಮಂದಿರ ಆವರಣದಲ್ಲಿ ಮುಸ್ಲಿಂ ವ್ಯಕ್ತಿಯೊಬ್ಬರು ನಮಾಜ್ ಮಾಡಲು ಯತ್ನಿಸಿದ ಸಂದರ್ಭದಲ್ಲಿ ಭದ್ರತಾ ಸಿಬ್ಬಂದಿ ಆತನನ್ನು ತಕ್ಷಣವೇ ಬಂಧಿಸಿದ್ದಾರೆ. ಈ ಘಟನೆ ದೇವಸ್ಥಾನ ಆವರಣದಲ್ಲಿ ಕೆಲಕಾಲ ಆತಂಕ ಮತ್ತು ಉದ್ವಿಗ್ನತೆಯ ವಾತಾವರಣ ನಿರ್ಮಾಣಕ್ಕೆ ಕಾರಣವಾಯಿತು.

ಬಂಧಿತನನ್ನು ಅಹ್ಮದ್ ಶೇಖ್ ಎಂದು ಗುರುತಿಸಲಾಗಿದ್ದು, ಆತ ಜಮ್ಮು ಮತ್ತು ಕಾಶ್ಮೀರ ಮೂಲದ ನಿವಾಸಿ ಎನ್ನಲಾಗಿದೆ. ಆತ ರಾಮ ಮಂದಿರದ ಗೇಟ್ ಮೂಲಕ ಒಳನುಗ್ಗಿದ್ದು, ದೇವಾಲಯದ ದಕ್ಷಿಣ ಭಾಗದ ಗೋಡೆಯ ಬಳಿ ನಮಾಜ್ ಮಾಡಲು ಯತ್ನಿಸುತ್ತಿದ್ದಾಗ ಭದ್ರತಾ ಸಿಬ್ಬಂದಿಯ ಕಣ್ಣಿಗೆ ಬಿದ್ದಿದ್ದಾನೆ. ಕೂಡಲೇ ಸ್ಥಳದಲ್ಲಿದ್ದ ಸಿಆರ್‌ಪಿಎಫ್ ಹಾಗೂ ಸ್ಥಳೀಯ ಭದ್ರತಾ ಪಡೆಗಳು ಆತನನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿವೆ.

ಭದ್ರತಾ ಸಿಬ್ಬಂದಿ ಹೆಚ್ಚಿನ ಎಚ್ಚರಿಕೆ ವಹಿಸಿದ್ದು, ಸಂಪೂರ್ಣ ರಾಮ ಮಂದಿರ ಆವರಣವನ್ನು ಕೆಲಕಾಲ ತಪಾಸಣೆಗೆ ಒಳಪಡಿಸಲಾಯಿತು. ಈ ಘಟನೆಯಲ್ಲಿ ಯಾವುದೇ ಹಿಂಸಾತ್ಮಕ ಘಟನೆ ಸಂಭವಿಸಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಆರೋಪಿಯ ಬಳಿಯಿಂದ ಅಲ್ಪ ಪ್ರಮಾಣದ ಒಣ ಹಣ್ಣುಗಳು, 2700 ರೂ. ನಗದು ಹಾಗೂ ಕೆಲವು ಫೋನ್ ಸಂಖ್ಯೆಗಳಿರುವ ಡೈರಿ ವಶಪಡಿಸಿಕೊಳ್ಳಲಾಗಿದೆ. ಆದರೆ ಯಾವುದೇ ಶಸ್ತ್ರಾಸ್ತ್ರಗಳು ಅಥವಾ ಸ್ಫೋಟಕ ವಸ್ತುಗಳು ಪತ್ತೆಯಾಗಿಲ್ಲ ಎಂದು ಮೂಲಗಳು ತಿಳಿಸಿವೆ.
ಆರೋಪಿಯ ಹಿನ್ನೆಲೆ ಕುರಿತು ಹೆಚ್ಚಿನ ಮಾಹಿತಿಗಾಗಿ ಜಮ್ಮು ಮತ್ತು ಕಾಶ್ಮೀರ ಪೊಲೀಸರೊಂದಿಗೆ ಸಂಪರ್ಕ ಸಾಧಿಸಲಾಗಿದ್ದು, ಆತನ ಪೂರ್ವ ಚಟುವಟಿಕೆಗಳು, ಸಂಚಾರ ವಿವರಗಳು ಹಾಗೂ ಸಂಪರ್ಕ ಜಾಲದ ಬಗ್ಗೆ ತನಿಖೆ ಮುಂದುವರಿದಿದೆ. ಈ ಘಟನೆಯ ಕುರಿತು ಅಯೋಧ್ಯಾ ಜಿಲ್ಲಾಡಳಿತ ಪ್ರತಿಕ್ರಿಯೆ ನೀಡಲು ನಿರಾಕರಿಸಿದ್ದು, ರಾಮ ಮಂದಿರ ಟ್ರಸ್ಟ್ ಕೂಡ ಇದುವರೆಗೆ ಅಧಿಕೃತ ಹೇಳಿಕೆ ನೀಡಿಲ್ಲ.

ಇದೇ ವೇಳೆ, ಅಯೋಧ್ಯಾ ಜಿಲ್ಲಾಡಳಿತವು ರಾಮ ಮಂದಿರದಿಂದ 15 ಕಿಲೋಮೀಟರ್ ವ್ಯಾಪ್ತಿಯಲ್ಲಿ ಮಾಂಸಾಹಾರಿ ಆಹಾರದ ವಿತರಣೆ ಮೇಲೆ ಸಂಪೂರ್ಣ ನಿಷೇಧ ಹೇರಿದೆ. ಪಂಚಕೋಶಿ ಪರಿಕ್ರಮಾ ಪ್ರದೇಶ ಸೇರಿದಂತೆ ಅಯೋಧ್ಯಾ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಆನ್‌ಲೈನ್ ಆಹಾರ ವಿತರಣಾ ಕಂಪನಿಗಳ ಮೂಲಕ ಮಾಂಸಾಹಾರಿ ಆಹಾರ ಪೂರೈಕೆ ನಡೆಯುತ್ತಿದೆ ಎಂಬ ದೂರುಗಳು ಬಂದ ಹಿನ್ನೆಲೆ ಈ ಕ್ರಮ ಕೈಗೊಳ್ಳಲಾಗಿದೆ.

ಅಯೋಧ್ಯೆಯಲ್ಲಿನ ಹೋಟೆಲ್‌ಗಳು ಮತ್ತು ಹೋಂಸ್ಟೇಗಳಿಗೆ ಸಹ ಎಚ್ಚರಿಕೆ ನೀಡಲಾಗಿದ್ದು, ಅತಿಥಿಗಳಿಗೆ ಮಾಂಸಾಹಾರಿ ಆಹಾರ ಮತ್ತು ಮದ್ಯ ವಿತರಿಸಬಾರದು ಎಂದು ಸೂಚಿಸಲಾಗಿದೆ. ಸಹಾಯಕ ಆಹಾರ ಆಯುಕ್ತ ಮಾಣಿಕ್ ಚಂದ್ರ ಸಿಂಗ್ ಮಾತನಾಡಿ, ಈಗಿರುವ ನಿಷೇಧದ ಹೊರತಾಗಿಯೂ ಆನ್‌ಲೈನ್ ಆರ್ಡರ್ ಮೂಲಕ ಮಾಂಸಾಹಾರಿ ಆಹಾರ ಪೂರೈಕೆ ನಡೆಯುತ್ತಿದೆ ಎಂಬ ದೂರುಗಳು ಬಂದಿವೆ. ಹೀಗಾಗಿ, ಅಂತಹ ಆನ್‌ಲೈನ್ ವಿತರಣೆಯನ್ನೂ ತಕ್ಷಣದಿಂದಲೇ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಕ್ಷುಲಕ ಕಾರಣಕ್ಕೆ ಪತ್ನಿ ಹತ್ಯೆ, ಬಳಿಕ ಪತಿಯ ಆತ್ಮಹತ್ಯೆ





ಬೈಲಹೊಂಗಲ ತಾಲೂಕಿನ ತುರಕರ ಶೀಗಿಹಳ್ಳಿ ಗ್ರಾಮದಲ್ಲಿ ಕ್ಷುಲಕ ಕಾರಣಕ್ಕೆ ಪತ್ನಿಯನ್ನು ಭೀಕರವಾಗಿ ಹತ್ಯೆಗೈದು, ನಂತರ ಪತಿಯೇ ಆತ್ಮಹತ್ಯೆಗೆ ಶರಣಾದ ಹೃದಯವಿದ್ರಾವಕ ಘಟನೆ ಬೆಳಕಿಗೆ ಬಂದಿದೆ.

ಮೃತ ದುರ್ದೈವಿ ಯಲ್ಲವ್ವ ಶಿವಪ್ಪ ಕಂಬಳಿ (40) ಹಾಗೂ ಆರೋಪಿಯಾಗಿ ಗುರುತಿಸಲ್ಪಟ್ಟ ಪತಿ ಶಿವಪ್ಪ ಸಣ್ಣಬಸಪ್ಪ ಕಂಬಳಿ (46) ದಂಪತಿಗಳ ನಡುವೆ ತವರು ಮನೆಗೆ ಹೋಗುವ ವಿಚಾರವಾಗಿ ಗಲಾಟೆ ನಡೆದಿರುವುದೇ ಈ ದುರಂತಕ್ಕೆ ಕಾರಣ ಎನ್ನಲಾಗಿದೆ.

ಪೊಲೀಸ್ ಮಾಹಿತಿ ಪ್ರಕಾರ, ಶಿವಪ್ಪನ ತಾಯಿ ಇತ್ತೀಚೆಗೆ ನಿಧನರಾಗಿದ್ದು, ಸಾವಿನ ನಂತರ ನಡೆಯುವ ಧಾರ್ಮಿಕ ವಿಧಿ ವಿಧಾನಗಳನ್ನು ಪೂರೈಸಲು ಯಲ್ಲವ್ವ ತವರು ಮನೆಗೆ ಹೋಗಿ ಬರುವುದಾಗಿ ಹೇಳಿದ್ದಳು. ಇದಕ್ಕಾಗಿ ಸಿಹಿ ಅಡುಗೆ ತಯಾರಿಸಿಕೊಂಡು ಹೊರಡುವ ಸಿದ್ಧತೆಯಲ್ಲಿದ್ದ ವೇಳೆ, ತವರು ಮನೆಗೆ ಹೋಗಬಾರದೆಂದು ಪತಿ ಶಿವಪ್ಪ ತಾಕೀತು ಮಾಡಿದ್ದಾನೆ. ಈ ವಿಚಾರವಾಗಿ ದಂಪತಿಗಳ ನಡುವೆ ತೀವ್ರ ವಾಗ್ವಾದ ನಡೆದಿದೆ.

ಘಟನೆಯ ದಿನ ಬೆಳಗ್ಗೆ ಮಗನಿಗೆ ಅಡುಗೆ ಮಾಡಿ, ನಂತರ ಊರಿಗೆ ಹೊರಡುವ ಉದ್ದೇಶದಿಂದ ಯಲ್ಲವ್ವ ಸ್ನಾನಕ್ಕೆ ತೆರಳಿದ ವೇಳೆ, ಶಿವಪ್ಪ ಕೊಡ್ಲಿಯಿಂದ ಕುತ್ತಿಗೆ ಹಾಗೂ ಬೆನ್ನಿಗೆ ಮಾರಣಾಂತಿಕ ಹಲ್ಲೆ ನಡೆಸಿ ಸ್ಥಳದಲ್ಲೇ ಹತ್ಯೆಗೈದಿದ್ದಾನೆ ಎಂದು ಹೇಳಲಾಗಿದೆ. ಬಳಿಕ ಆತನೇ ಆತ್ಮಹತ್ಯೆಗೆ ಶರಣಾಗಿದ್ದಾನೆ.

ಈ ಕೃತ್ಯದಿಂದ ಗ್ರಾಮದಲ್ಲಿ ಆತಂಕ ಮತ್ತು ಶೋಕದ ವಾತಾವರಣ ಆವರಿಸಿದೆ. ಕೌಟುಂಬಿಕ ಕಲಹ ಕೊಲೆಯಲ್ಲಿ ಅಂತ್ಯಗೊಂಡಿರುವುದು ಮತ್ತೊಮ್ಮೆ ಸಮಾಜವನ್ನು ಬೆಚ್ಚಿಬೀಳಿಸಿದೆ.

**ಘಟನಾ ಸ್ಥಳಕ್ಕೆ ಶಿವಾನಂದ ಗುಡಗನಟ್ಟಿ**:ಕಿತ್ತೂರು ವೃತ್ತ ನಿರೀಕ್ಷಕರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಘಟನೆ ಕಿತ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಪೊಲೀಸರು ಮೃತ ದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದು, ಪ್ರಕರಣದ ಎಲ್ಲಾ ಆಯಾಮಗಳನ್ನು ಪರಿಶೀಲಿಸಲಾಗುತ್ತಿದೆ .

# ಶಾಲೆಗಳಿಗೆ ಮೂಲಸೌಕರ್ಯಗಳನ್ನು ಒದಗಿಸುವುದು ನಮ್ಮ ಆದ್ಯತೆ : ಶಾಸಕ ಎಸ್. ಮುನಿರಾಜು



**ಪೀಣ್ಯ,ದಾಸರಹಳ್ಳಿ:** 'ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಸುಸಜ್ಜಿತವಾದ ಕೊಠಡಿಗಳು, ಕುಡಿಯುವ ನೀರು ಮತ್ತು ಶೌಚಾಲಯದಂತಹ ಮೂಲಸೌಕರ್ಯಗಳನ್ನು ಒದಗಿಸುವುದು ನಮ್ಮ ಆದ್ಯತೆಯಾಗಿದೆ'ಎಂದು ಶಾಸಕ ಎಸ್. ಮುನಿರಾಜು ಹೇಳಿದರು.

ಕಾನ್ಶಿರಾಮನಗರದಲ್ಲಿ ವಿವೇಕಾ ಯೋಜನೆಯಡಿಯಲ್ಲಿ ಅಂದಾಜು 32ಲಕ್ಷ ವೆಚ್ಚದ ಮೂರು ಶಾಲಾ ಕೊಠಡಿ ಹಾಗೂ ಅಬ್ಬಿಗೆರೆಯ ಶಾಲಾ ಮೈದಾನದಲ್ಲಿ ಮೂರು ಲಕ್ಷ ವೆಚ್ಚದ ಶೌಚಾಲಯ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.

ಹೊಸ ಕೊಠಡಿಗಳ ನಿರ್ಮಾಣದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ, ಅತ್ಯಂತ ಗುಣಮಟ್ಟದ ವಸ್ತುಗಳನ್ನು ಬಳಸಿ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ'ಎಂದು ತಿಳಿಸಿದರು.

ಮಾಜಿ ಬಿಬಿಎಂಪಿ ಸದಸ್ಯ ಕೆ. ನಾಗಭೂಷಣ್,ದಾಸರಹಳ್ಳಿ ಮಂಡಲ ಬಿಜೆಪಿ ಅಧ್ಯಕ್ಷ ಮೇದರಹಳ್ಳಿ ಸೋಮಶೇಖರ್, ಬಿಜೆಪಿ ಮುಖಂಡ ಲಾರಿ ಮಂಜುನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎನ್. ಶೈಲಾ, ಶಿಕ್ಷಕ ಜಿ. ನಾಗರಾಜು, ಚಿಕ್ಕಬೈಲಪ್ಪ ಮತ್ತು ಸ್ಥಳೀಯರಿದ್ದರು.

# ಆಟವೇ ಕಲಿಕೆಯ ಮೂಲಭೂತ ಪಾಠ ಎಂಬ ಸತ್ಯವನ್ನು ಮರೆತ ಸಮಾಜ

ಶಾಲಾ ಹಂತದಲ್ಲಿರುವ ಮಕ್ಕಳ ದೇಹದಲ್ಲಿ ಹಾರ್ಮೋನುಗಳು ಸದೃಢವಾಗಿ ಬೆಳೆಯುವ ಹಾಗೂ ಮನಸ್ಸು ವಿಕಸಿಸುವ ಅತ್ಯಂತ ಪ್ರಮುಖ ಸಮಯ ಇದು. ಈ ಅವಧಿಯಲ್ಲಿ ದೇಹ ದಣಿದರೆ, ಮನಸ್ಸು ಹದಗೊಳ್ಳುತ್ತದೆ. ಓದಿನ ಜೊತೆಗೆ ಊಟ, ಆಟ, ಹಾರಾಟ, ನಗು, ತಮಾಷೆ, ಬೆವರು — ಇವೆಲ್ಲವೂ ಸೃಜನಶೀಲತೆಗೆ ಪೋಷಕವಾಗುತ್ತವೆ. 'ನಲಿ-ಕಲಿ' ಎನ್ನುವ ಸರ್ಕಾರದ ಧ್ಯೇಯೋದ್ದೇಶವೂ ದೇಹ ಮತ್ತು ಮನಸ್ಸಿನ ಸದೃಢತೆಯನ್ನು ಕಾಪಾಡುವುದೇ ಆಗಿದೆ. ಆದರೆ ಆತಂಕಕಾರಿ ವಿಷಯವೇನೆಂದರೆ, ದೇಹದೊಂದಿಗೆ ಮನಸ್ಸು ವಿಕಸಿಸಬೇಕಾದ ಈ ಹಂತದಲ್ಲಿ ನಾವು ನಮ್ಮ ಮಕ್ಕಳನ್ನು ಅಂಕಪಟ್ಟಿಯೊಂದಿಗೆ ಜೋಡಿಸಿ, ಅವರ ತಲೆ ತುಂಬಾ ಅಂಕಗಳನ್ನೇ ತುಂಬಲು ಪ್ರಯತ್ನಿಸುತ್ತಿದ್ದೇವೆ.

ಅಂಕಪಟ್ಟಿಯು ನಮ್ಮ ಜೀವನವನ್ನು ನಿರ್ಧರಿಸುವುದಿಲ್ಲ. ನಮ್ಮ ಸಾಮಾನ್ಯ ಜ್ಞಾನವು ಪರಿಸರ ಹಾಗೂ ಪ್ರಕೃತಿಯೊಂದಿಗೆ ಹೊಂದಿಕೊಂಡಿರುತ್ತದೆ. ಆದರೆ ಸರ್ಕಾರದ ನಲಿ-ಕಲಿ ನಿಲುವನ್ನು ಬದಿಗೊತ್ತಿ, ಅನೇಕ ಶಾಲೆಗಳು ತಮ್ಮ ಪ್ರತಿಷ್ಠೆಯನ್ನು ತೋರ್ಪಡಿಸಲು ಮಕ್ಕಳನ್ನು ಕೇವಲ ಓದುವ ಯಂತ್ರಗಳನ್ನಾಗಿ ಮಾಡುತ್ತಿವೆ. ಇದರ ಪರಿಣಾಮವಾಗಿ ಮಕ್ಕಳ ಸಂತೋಷವನ್ನು ಕಿತ್ತುಕೊಂಡು, ಅವರನ್ನು ಆಟದಿಂದ ಬಹಳ ದೂರ ಇಡಲಾಗಿದೆ.

ತಮ್ಮ ಮಗ ಅಥವಾ ಮಗಳು 10ನೇ ತರಗತಿಗೆ ಬಂದ ಕ್ಷಣದಿಂದಲೇ "ಹೆಸರು-ಮರ್ಯಾದೆ" ಎಂಬ ಹೆಸರಿನಲ್ಲಿ ಶಿಕ್ಷಕರು, ಸಂಸ್ಥೆಗಳ ಮಾಲೀಕರು ಮತ್ತು ಮಾರ್ಗದರ್ಶಕರು ಮಗುವಿನ ಜೀವನವನ್ನು ಅಂಕಗಳೊಂದಿಗೆ ತೂಕಮಾಪನ ಮಾಡಲು ಆರಂಭಿಸುತ್ತಾರೆ. ಫಲಿತಾಂಶ ಎಂಬ ಲಕ್ಷ್ಮಣ ರೇಖೆಯೊಳಗೆ ಮಗುವನ್ನು ಬಂಧಿಸಿ, ಕಾವಲು ಕಾಯಲಾಗುತ್ತಿದೆ.

ಇಂದಿನ ಮಕ್ಕಳಿಗೆ ಒಂದೇ ಸಮಯದಲ್ಲಿ ಎರಡು ಶಾಲೆಗೆ ಹೋಗುವಂತಾಗಿದೆ — ಒಂದು ತಮ್ಮ ನಿಯಮಿತ ಶಾಲೆ, ಮತ್ತೊಂದು ಟ್ಯೂಷನ್. ಟ್ಯೂಷನ್ ಇಂದು ದೊಡ್ಡ ವ್ಯಾಪಾರ ಕೇಂದ್ರಗಳಾಗಿ ಬೆಳೆದಿವೆ. ಎಲ್‌ಕೆಜಿ-ಯುಕೆಜಿ ಮಕ್ಕಳೂ ಸಹ ಟ್ಯೂಷನ್‌ಗೆ ಹೋಗುತ್ತಿರುವುದು ವಿಪರ್ಯಾಸ. ಮಕ್ಕಳ ದೇಹಕ್ಕೆ ವ್ಯಾಯಾಮವಿಲ್ಲ, ಕಣ್ಣುಗಳಿಗೆ ವಿಶ್ರಾಂತಿ ಇಲ್ಲ, ಮನಸ್ಸಿಗೆ ಶಾಂತಿ ಇಲ್ಲ.




ನಾವು ಮಗುವಿನ ಓದಿನ ಪ್ರಯಾಣದ ಬಗ್ಗೆ ಮಾತ್ರ ಚಿಂತಿಸುತ್ತೇವೆ. ಶಾಲೆಗಳು, ಪೋಷಕರು ಮತ್ತು ಸಮಾಜ — ಎಲ್ಲರೂ ಸೇರಿ ಈ ವಯಸ್ಸಿನ ಮಕ್ಕಳನ್ನು "ಈ ಹಂತದಲ್ಲಿ ತಪ್ಪಿದರೆ ಜೀವನವನ್ನೇ ತಪ್ಪುತ್ತೀ" ಎಂಬ ಭಯದ ಮನೋಭಾವದೊಳಗೆ ತಳ್ಳುತ್ತಿದ್ದಾರೆ. ಇದರಿಂದ ಮಕ್ಕಳ ಮನಸ್ಸಿನ ಮೇಲೆ ಗಂಭೀರ ಪರಿಣಾಮ ಬೀರುತ್ತದೆ ಎಂಬುದನ್ನು ನಾವು ಮರೆಯಬಾರದು.

ತಲೆಗೆ ಅತಿಯಾದ ಒತ್ತಡ ನೀಡುವ ಈ ಕಲಿಕಾ ಕ್ರಮ ನಿಧಾನವಾಗಿ ದೈಹಿಕ ವೈಕಲ್ಯಗಳಿಗೆ ಕಾರಣವಾಗಬಹುದು ಎಂಬುದು ಸಂಶೋಧನೆಗಳಿಂದ ಹೊರಬಿದ್ದಿದೆ. ಇದನ್ನು ಆಧರಿಸಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಕೇಟಿ ತಿಪ್ಪೇಸ್ವಾಮಿ ಅವರು ಇತ್ತೀಚೆಗೆ ಶಿಕ್ಷಣ ಇಲಾಖೆಗೆ ಪತ್ರ ಬರೆದು, 10ನೇ ತರಗತಿ ವಿದ್ಯಾರ್ಥಿಗಳಿಗೆ ಆಟ ಹಾಗೂ ದೈಹಿಕ ಶಿಕ್ಷಣದ ಅವಕಾಶ ನೀಡಲು ಒತ್ತಾಯಿಸಿದ್ದಾರೆ.

10ನೇ ತರಗತಿಯಲ್ಲಿ ಉತ್ತಮ ಅಂಕ ಗಳಿಸಬೇಕೆಂಬ ಕಾರಣಕ್ಕಾಗಿ, ಸರ್ಕಾರಿ ಶಾಲೆಗಳನ್ನೂ ಸೇರಿಸಿ ಬಹುತೇಕ ಶಿಕ್ಷಣ ಸಂಸ್ಥೆಗಳು ಇಂದು ದೈಹಿಕ ಶಿಕ್ಷಣ ಮತ್ತು ನಿಯಮಿತ ಆಟಗಳ ತರಗತಿಗಳನ್ನು ರದ್ದು ಮಾಡುತ್ತಿವೆ. ಇದು ಮಕ್ಕಳ ಕಲಿಕೆಯ ಮೇಲೆ ನೇರವಾದ ದುಷ್ಪರಿಣಾಮ ಬೀರುತ್ತದೆ.

ಮನೆ ಮತ್ತು ಶಾಲೆಗಳಲ್ಲಿ ಇಡೀ ದಿನ ಮಗುವನ್ನು ಓದಿಗಾಗಿ ಪೀಡಿಸುವುದರಿಂದ ಅದು ದೃತಿಗೆಡುವ ಸಾಧ್ಯತೆ ಹೆಚ್ಚುತ್ತದೆ. ಅದೇ ಒತ್ತಡದಲ್ಲಿ ಮಗುವಿನ ಮನಸ್ಸು ಹೊಸತನವನ್ನು ಕಳೆದುಕೊಳ್ಳುತ್ತದೆ. ದೈಹಿಕ-ಮಾನಸಿಕ ಆರೋಗ್ಯಕ್ಕಿಂತ ಫಲಿತಾಂಶಗಳ ನಿರೀಕ್ಷೆಯಲ್ಲೇ ಬದುಕುತ್ತಿರುವವರಿಗೆ ಇದು ಗಣನೀಯ ವಿಷಯವಾಗದೇ ಹೋಗುವುದು ದುರಂತ.

ನಾವು ಆಟ ಮತ್ತು ವ್ಯಾಯಾಮವನ್ನು ಓದಿಗೆ ಅಡ್ಡಿಯೆಂದು ನೋಡುತ್ತಿದ್ದೇವೆ. ಆದರೆ ಆಟವೇ ಕಲಿಕೆಯ ಮೂಲಭೂತ ವಿಧಾನ ಎಂಬ ಅಂಶವನ್ನು ಮರೆತಿದ್ದೇವೆ. ಮಗು ಆಟದ ಮೂಲಕ ಶಿಸ್ತು, ಸಹನೆ, ಸಹಕಾರ, ಆರೋಗ್ಯ, ಸೋಲು-ಗೆಲುವಿನ ಅನುಭವಗಳ ಪಾಠಗಳನ್ನು ಕಲಿಯುತ್ತದೆ. ಆದರೆ ಇಂದು ನಮ್ಮ ಕ್ರೀಡಾಂಗಣಗಳು ಖಾಲಿಯಾಗಿವೆ; ಟ್ಯೂಷನ್ ಕೇಂದ್ರಗಳು ತುಂಬಿವೆ.

ಮಕ್ಕಳ ಬಾಲ್ಯವನ್ನು ನಾವು ವ್ಯವಹಾರಿಕ-ಆರ್ಥಿಕ ಅಂಕಪಟ್ಟಿಯ ಚೀಲದೊಳಗೆ ತುಂಬುತ್ತಿದ್ದೇವೆ. ಮಗು ಕಲಿಯಬೇಕು; ಆದರೆ ಬರೆಯುವ ಪರೀಕ್ಷೆ ಯಾವತ್ತೂ ಬದುಕುವ ಪರೀಕ್ಷೆಗಿಂತ ದೊಡ್ಡದಲ್ಲ.

ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಪ್ಪಂದದ 31ನೇ ವಿಧಿಯ ಪ್ರಕಾರ, ಆಟ ಮತ್ತು ವಿಶ್ರಾಂತಿ ಮಕ್ಕಳ ಶಾರೀರಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅತ್ಯಾವಶ್ಯಕ. ಆದರೆ ಶಿಕ್ಷಕರು ಮತ್ತು ಶಾಲಾ ಆಡಳಿತ ಮಂಡಳಿಗಳು ಈ ಹಕ್ಕಿನ ಮಹತ್ವವನ್ನು ಅರಿಯದೇ ಇರುವ ಕಾರಣ, ಮಕ್ಕಳು ಮಾನಸಿಕ ಹಿಂಸೆಗೆ ಒಳಗಾಗುತ್ತಿದ್ದಾರೆ.



**ನಾಗರಾಜು**
ದೈಹಿಕ ಶಿಕ್ಷಣ ನಿರ್ದೇಶಕರು
MPed, KSET

# ಆನ್‌ಲೈನ್‌ನಲ್ಲಿ ಉಡದ ಜನನಾಂಗ ಮಾರಾಟ ಮಾಡಿ ಹಣ ದೋಚುತ್ತಿದ್ದ ಆರೋಪಿ

**ಬೆಂಗಳೂರು:** ಮಾಂತ್ರಿಕನೊಬ್ಬ ಉಡದ ಜನನಾಂಗಗಳನ್ನು ಆನ್‌ಲೈನ್‌ನಲ್ಲಿ ಮಾರಾಟ ಮಾಡುತ್ತಿದ್ದಾಗ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ. ಪ್ರೀತಿಗಾಗಿ ವಶೀಕರಣ, ಪ್ರೇಮ ವಿವಾಹದ ಕಲಹಗಳಿಗೆ ಈ ಹಲ್ಲಿಯ ಜನನಾಂಗವನ್ನು ನೀಡುತ್ತಿದ್ದ ಎಂದು ಹೇಳಲಾಗಿದೆ. ಮಾಂತ್ರಿಕ ಶಕ್ತಿ ಇದೆ ಎಂದು ಹೇಳಿಕೊಂಡು ಜನರನ್ನು ನಂಬಿಸುತ್ತಿದ್ದ, ಪ್ರೇಮಿಗಳ ನಡುವಿನ ಘರ್ಷಣೆಯನ್ನು ಪರಿಹರಿಸಬಹುದು ಎಂದು ಹೇಳಿ ಪ್ರತಿ ತುಂಡನ್ನು 10,000 ರೂ.ಗೆ ಮಾರಾಟ ಮಾಡಿದನೆಂದು ವರದಿಯಾಗಿದೆ. ಈ ಬಗ್ಗೆ ಸುಳಿವು ಸಿಕ್ಕ ತಕ್ಷಣ, ಎನ್‌ಜಿಒವೊಂದು ತನಿಖೆ ಮಾಡಲು ವೈಯಕ್ತಿಕ ಸಮಸ್ಯೆ ಎಂದು ನಟಿಸಿ, ಈ ವ್ಯಕ್ತಿಯ ಬಳಿ ಹೋಗಿದ್ದಾರೆ. ಈ ವೇಳೆ ಈ ದೇವಮಾನವನ ಸತ್ಯ ಬಯಲಾಗಿದೆ. ದೇವಮಾನವ ತನ್ನ ವನ್ಯಜೀವಿ ಉತ್ಪನ್ನಗಳ ಸಂಗ್ರಹವನ್ನು ಎನ್‌ಜಿಒ ಪ್ರತಿನಿಧಿಗೆ ತೋರಿಸಿದ್ದಾನೆ. ನಂತರ ಈ ವಿಷಯವನ್ನು ಕಂದಾಯ ಗುಪ್ತಚರ ನಿರ್ದೇಶನಾಲಯಕ್ಕೆ (ಡಿಆರ್‌ಐ) ವರದಿ ಮಾಡಲಾಯಿತು. ನಂತರ ಅವರನ್ನು ದಾಳಿ ಮಾಡಿ, ಸ್ವಯಂ ಘೋಷಿತ ದೇವಮಾನವನ ಬಂಧನ ಮಾಡಿದ್ದಾರೆ.

ಬಂಧಿತ ವ್ಯಕ್ತಿಯನ್ನು ಮೂರ್ತಿ (45) ಎಂದು ಗುರುತಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಮೃದು ಹವಳ ಮತ್ತು ಇತರ ವನ್ಯಜೀವಿ ವಸ್ತುಗಳ ವ್ಯಾಪಾರ ಮಾಡುತ್ತಿದ್ದ, ಅದೃಷ್ಟ ಮತ್ತು ಸಮೃದ್ಧಿಗಾಗಿ ಮೃದುವಾದ ಹವಳವನ್ನು ತಾಲಿಸ್ಮನ್ ಆಗಿ ಮಾರಾಟ ಮಾಡುತ್ತಿದ್ದರು ಎಂದು ಆರೋಪಿಸಲಾಗಿದೆ. ಅನೇಕರು ಇದರ ಮಾರಾಟದ ಹಕ್ಕನ್ನು ಪಡೆದಿದ್ದರು. ಮೂರ್ತಿ ಈ ವನ್ಯಜೀವಿ ಉತ್ಪನ್ನಗಳನ್ನು ತಮಿಳುನಾಡು ಮತ್ತು ಇತರ ಪ್ರದೇಶಗಳಲ್ಲಿನ ಹಕ್ಕಿ ಪಿಕ್ಕಿ ಸಮುದಾಯದ ಸಂಪರ್ಕಗಳ ಮೂಲಕ ಪಡೆಯುತ್ತಿದ್ದ ಎಂದು ಹೇಳಲಾಗಿದೆ. ದೇಶಾದ್ಯಂತ ಸುಮಾರು 25,000 ಜನ ಈತನ ಭಕ್ತರಾಗಿದ್ದರು. ಅವರಲ್ಲಿ ಹಲವರು ಪ್ರೀತಿ ಅಥವಾ ವೈಯಕ್ತಿಕ ಸಮಸ್ಯೆಗಳಿಗಾಗಿ ಮೂರ್ತಿಯನ್ನು ಸಂಪರ್ಕಿಸಿದರು ಎಂದು ಹೇಳಲಾಗಿದೆ.

ಮೂರ್ತಿ ಆನ್‌ಲೈನ್ ವ್ಯವಹಾರದ ಬಗ್ಗೆ ಎನ್‌ಜಿಒ ಕೇರ್‌ಗೆ ಗುಪ್ತಚರ ಮಾಹಿತಿ ಬಂದ ನಂತರ ಕಾರ್ಯಾಚರಣೆ ಆರಂಭವಾಯಿತು. ಎನ್‌ಜಿಒ ಸದಸ್ಯರೊಬ್ಬರು ಮೂರ್ತಿಯ ಕ್ಲೈಂಟ್‌ನಂತೆ ನಟಿಸಿ ನಂತರ ನಾಗಶೆಟ್ಟಿಹಳ್ಳಿಯಲ್ಲಿರುವ ಮನೆಗೆ ಭೇಟಿ ನೀಡಿ, ನಂತರ ಪುರಾವೆಗಳನ್ನು ಸಂಗ್ರಹಿಸಲು ಸಹಾಯ ಮಾಡಿದ್ದಾರೆ. ದಾಳಿಯ ಸಮಯದಲ್ಲಿ, ಅಧಿಕಾರಿಗಳು 206 ಮಾನಿಟರ್ ಹಲ್ಲಿ ಜನನಾಂಗಗಳು, 1.5 ಕೆಜಿ ಮೃದು ಹವಳ, ಹುಲಿ ಚರ್ಮ ಮತ್ತು ಇತರ ಧಾರ್ಮಿಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಮೂರ್ತಿ ವಿರುದ್ಧ ವನ್ಯಜೀವಿ (ರಕ್ಷಣೆ) ಕಾಯ್ದೆಯ ಹಲವಾರು ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ವಶಪಡಿಸಿಕೊಂಡ ವನ್ಯಜೀವಿ ಉತ್ಪನ್ನಗಳನ್ನು ಹೆಚ್ಚಿನ ಪರೀಕ್ಷೆಗಾಗಿ ಬನ್ನೇರುಘಟ್ಟ ಅರಣ್ಯ ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ.

# ಒಡಿಶಾದಲ್ಲಿ ವಿಮಾನ ಪತನ; ಪೈಲಟ್ ಸ್ಥಿತಿ ಗಂಭೀರ



**ಒಡಿಶಾ:** ರೂರ್ಕೆಲಾದಿಂದ ಭುವನೇಶ್ವರಕ್ಕೆ ತೆರಳುತ್ತಿದ್ದ ಇಂಡಿಯಾ ಒನ್ ಏರ್ ಸಂಸ್ಥೆಗೆ ಸೇರಿದ ಸಣ್ಣ ಚಾರ್ಟರ್ ವಿಮಾನವೊಂದು ತಾಂತ್ರಿಕ ದೋಷದಿಂದ ಪತನಗೊಂಡಿದೆ. ಈ ಘಟನೆ ಒಡಿಶಾದಲ್ಲಿ ಶನಿವಾರ (ಜನವರಿ 10) ಮಧ್ಯಾಹ್ನ ಸಂಭವಿಸಿದೆ.

ವಿಮಾನದಲ್ಲಿದ್ದ ಪೈಲಟ್ ಸೇರಿ ಒಟ್ಟು ಏಳು ಮಂದಿ ಪ್ರಯಾಣಿಸುತ್ತಿದ್ದು, ಅಪಘಾತದಲ್ಲಿ ಎಲ್ಲರೂ ಗಾಯಗೊಂಡಿದ್ದಾರೆ. ಆದರೆ ಅದೃಷ್ಟವಶಾತ್ ಯಾವುದೇ ಸಾವುನೋವು ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ವಿಮಾನವು ರೂರ್ಕೆಲಾ ವಿಮಾನ ನಿಲ್ದಾಣದಿಂದ ಟೇಕ್-ಆಫ್ ಆದ ಕೆಲವೇ ಕ್ಷಣಗಳಲ್ಲಿ ತಾಂತ್ರಿಕ ಸಮಸ್ಯೆ ಉಂಟಾಗಿದೆ. ತಕ್ಷಣವೇ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡ ಪೈಲಟ್ ವಿಮಾನವನ್ನು ಜನವಸತಿ ಪ್ರದೇಶದಿಂದ ದೂರವಿರುವ ಬಯಲು ಪ್ರದೇಶದಲ್ಲಿ ಇಳಿಸುವ ಪ್ರಯತ್ನ ಮಾಡಿದ್ದಾರೆ.

ವಿಮಾನವು ರೂರ್ಕೆಲಾ ನಗರದಿಂದ ಸುಮಾರು 10 ರಿಂದ 15 ಕಿಲೋಮೀಟರ್ ದೂರದ ಜಗದಾ ಬ್ಲಾಕ್ ಸಮೀಪದ ಏರ್‌ಸ್ಟ್ರಿಪ್ ಪ್ರದೇಶದ ಬಳಿ ಪತನಗೊಂಡಿದೆ. ಅಪಘಾತದ ಪರಿಣಾಮ ವಿಮಾನಕ್ಕೆ ಭಾರೀ ಹಾನಿಯಾಗಿದ್ದು, ಕೆಲ ಭಾಗಗಳು ಸಂಪೂರ್ಣವಾಗಿ ನಾಶವಾಗಿವೆ. ಅಪಘಾತ ಸಂಭವಿಸಿದ ತಕ್ಷಣ ಸ್ಥಳೀಯರು ಹಾಗೂ ವಿಮಾನ ನಿಲ್ದಾಣದ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆಗೆ ಧಾವಿಸಿದ್ದು, ಗಾಯಾಳುಗಳನ್ನು ತಕ್ಷಣವೇ ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ.

ಪೈಲಟ್‌ನ ಸ್ಥಿತಿ ಗಂಭೀರವಾಗಿದ್ದು, ವೈದ್ಯರು ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡುತ್ತಿದ್ದಾರೆ. ಉಳಿದ ಏಳು ಪ್ರಯಾಣಿಕರು ವಿವಿಧ ರೀತಿಯ ಗಾಯಗಳನ್ನು ಹೊಂದಿದ್ದು, ಅವರ ಸ್ಥಿತಿ ಸದ್ಯಕ್ಕೆ ಸ್ಥಿರವಾಗಿದೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ಈ ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ತುರ್ತು ಸೇವಾ ತಂಡಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಯಾವುದೇ ಗೊಂದಲ ಅಥವಾ ಆತಂಕ ಉಂಟಾಗದಂತೆ ಪ್ರದೇಶದಲ್ಲಿ ಭದ್ರತಾ ಕ್ರಮಗಳನ್ನು ಹೆಚ್ಚಿಸಲಾಗಿದೆ. ಅಲ್ಲದೆ, ವಿಮಾನ ಪತನದ ನಿಖರ ಕಾರಣವನ್ನು ಪತ್ತೆಹಚ್ಚಲು ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ.

# ಸೈಬರ್ ವಂಚಕರ ಹೊಸ ಜಾಲಕ್ಕೆ ನಗರದಲ್ಲಿ ಮತ್ತೊಬ್ಬ ಬಲಿ

**ಬೆಂಗಳೂರು:**ಯುವಕರೇ ಎಚ್ಚರ... ಹುಡುಗಿ ಚೆನ್ನಾಗಿದ್ದಾಳೆ ಎಂದು ಫೋನ್ ಎತ್ತಿದ್ರೆ, ಎಕೌಂಟ್‌ನಲ್ಲಿದ್ದ ಹಣ ಖಾಲಿಯಾಗುವುದು ಖಂಡಿತ. ಇಂತಹ ಮೋಸದ ಜಾಲದಿಂದ ಅದೆಷ್ಟೋ ಯುವಕರು ಬೆತ್ತಲೆ ಆಗಿರುವ ಪ್ರಕರಣಗಳು ಆಗ್ಗಾಗ್ಗೆ ಬೆಳಕಿಗೆ ಬರುತ್ತಿದೆ. ಇದೀಗ ಬೆಂಗಳೂರಿನಲ್ಲಿ ಇಂತಹದೇ ಘಟನೆಯೊಂದು ನಡೆದಿದೆ. ಕರ್ನಾಟಕದಲ್ಲಿ ಡೇಟಿಂಗ್ ಅಪ್ಲಿಕೇಶನ್‌ಗಳಿಂದ ವಂಚನೆ ಪ್ರಕರಣಗಳು ಹೆಚ್ಚಾಗುತ್ತಿದೆ. ಯುವಕನೊಬ್ಬ ಡೇಟಿಂಗ್ ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಂಡು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ (AI) ಬಳಸಿ ರಚಿಸಲಾದ "ಇಶಾನಿ" ಹೆಸರಿನ ಪ್ರೊಫೈಲ್‌ನಿಂದ ಬಂದ ರಿಕ್ವೆಸ್ಟ್‌ಗೆ ಕ್ಲಿಕ್ ಮಾಡಿದ್ದಾನೆ. ಈ "ಇಶಾನಿ" ಎಂಬ ಎಐ ಹುಡುಗಿ, ಯುವಕನನ್ನು ವಿವಸ್ತ್ರಗೊಳಿಸಿ, ಆ ವಿಡಿಯೋವನ್ನು ಇಟ್ಟುಕೊಂಡು ಹಣಕ್ಕೆ ಬೇಡಿಕೆ ಇಟ್ಟಿದ್ದಾಳೆ. ಇದರಿಂದ ಭಯಗೊಂಡ ಯುವಕ ನಕಲಿ ಖಾತೆಗೆ ಒಟ್ಟು 1.5 ಲಕ್ಷ ರೂ.ಗಳನ್ನು ವರ್ಗಾಯಿಸಿದ್ದಾನೆ.

ಈಜಿಪುರದ ಈ ಯುವಕ, ಖಾಸಗಿ ಸಂಸ್ಥೆಯಲ್ಲಿ ಕ್ಲೌಡ್ ಎಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದಾನೆ. ಜನವರಿ 5 ರಂದು ಡೇಟಿಂಗ್ ಅಪ್ಲಿಕೇಶನ್ ಆ್ಯಪ್‌ನಲ್ಲಿ ಪ್ರೊಫೈಲ್ ರಚಿಸಿದ ತಕ್ಷಣ ಇಶಾನಿ ಎಂಬ ಯುವತಿಯಿಂದ ರಿಕ್ವೆಸ್ಟ್ ಬಂದಿದೆ. ಇಬ್ಬರು ಕೂಡ ಏಕಾಂತವಾಗಿ ಮಾತನಾಡಲು ಶುರು ಮಾಡಿದ್ದರು. ಖಾಸಗಿ ವಿಚಾರಗಳನ್ನು ಹಂಚಿಕೊಂಡಿದ್ದರು. ನಂತರ ಈ ಇಬ್ಬರು ಕೂಡ ಮೊಬೈಲ್ ನಂಬರ್ ಶೇರ್ ಮಾಡಿಕೊಂಡು ಅಲ್ಲಿಯೂ ಮಾತನಾಡಲು ಶುರು ಮಾಡಿಕೊಂಡಿದ್ದರು ಎಂದು ದಿ ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

ಅದೇ ದಿನ ಈ ಯುವಕನಿಗೆ ಯುವತಿ ಕಡೆಯಿಂದ ವಿಡಿಯೋ ಕಾಲ್ ಬಂದಿದೆ. ಬಟ್ಟೆಯನ್ನು ಬಿಚ್ಚಿ, ಆತನ ಮುಂದೆ ಬೆತ್ತಲೆಯಾಗಿದ್ದಾಳೆ. ನೀನು ಬಟ್ಟೆ ಬಿಚ್ಚು ಎಂದು ಹೇಳಿ, ಅವನನ್ನು ಬೆತ್ತಲೆ ಮಾಡಿದ್ದಾಳೆ. ಆತನ ಕೂಡ ಹುಡುಗಿಯ ತೆವಲಿನಲ್ಲಿ ಬಟ್ಟೆಯನ್ನು ಬಿಚ್ಚಿದ್ದಾನೆ. ವಿಡಿಯೋ ಕರೆ ಕೊನೆಗೊಳ್ಳುತ್ತದೆ. ಅಲ್ಲಿಯವರೆಗೆ ತಾನು ಮತ್ತು ಆಕೆ ಬೆತ್ತಲೆ ಆಗಿರುವ ವಿಡಿಯೋ ರೆಕಾರ್ಡ್ ಆಗಿದೆ ಎಂಬುದು ಆತನಿಗೆ ತಿಳಿದಿರುವುದಿಲ್ಲ. ಸ್ವಲ್ಪ ಸಮಯದ ನಂತರ, ಟೆಕ್ಕಿಗೆ ವೀಡಿಯೊ ಕರೆಯ ಸಮಯದಲ್ಲಿ ಸೆರೆಹಿಡಿಯಲಾದ ತನ್ನ ಖಾಸಗಿ ಚಿತ್ರಗಳ ಬಗ್ಗೆ ಸಂದೇಶ ಬಂದಿದೆ. ಈ ವೇಳೆ ಹಣಕ್ಕೆ ಬೇಡಿಕೆ ಇಟ್ಟಿದ್ದಾಳೆ. ಒಂದು ವೇಳೆ ಹಣ ನೀಡದಿದ್ದರೆ ಈ ವಿಡಿಯೋವನ್ನು ನಿನ್ನ ಸ್ನೇಹಿತರು, ಕುಟುಂಬಕ್ಕೆ ಕಳುಹಿಸಿವೆ. ಸಾಮಾಜಿಕ ಜಾಲತಾಣದಲ್ಲೂ ಹಂಚಿಕೊಳ್ಳುವೆ ಎಂದು ಹೇಳಿದ್ದಾಳೆ. ಇದರಿಂದ ಭಯಗೊಂಡ ಯುವಕ ಮೊದಲು 60 ಸಾವಿರ ಹಾಗೂ ನಂತರ 93,000 ರೂ.ಗಳನ್ನು ಕಳುಹಿಸಿದ್ದಾನೆ. ಇಷ್ಟು ಹಣ ನೀಡಿದ ನಂತರವೂ ಮತ್ತೆ ಮತ್ತೆ ಹಣಕ್ಕೆ ಬೇಡಿಕೆ ಇಟ್ಟಿದ್ದಾಳೆ.

ಇದರಿಂದ ಬೇಸತ್ತು ಯುವಕ ತನ್ನ ಸ್ನೇಹಿತನಿಗೆ ಎಲ್ಲ ವಿಷಯ ಹೇಳಿದ್ದಾನೆ. ನಂತರ ಪೊಲೀಸರಿಗೆ ದೂರು ನೀಡಿದ್ದಾನೆ. ಅವರ ದೂರಿನ ಆಧಾರದ ಮೇಲೆ, ಕೇಂದ್ರ ಸೈಬರ್ ಅಪರಾಧ ಪೊಲೀಸ್ ಠಾಣೆಯು ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸಂಬಂಧಿತ ವಿಭಾಗಗಳು ಮತ್ತು ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 308 (ಸುಲಿಗೆ) ಅಡಿಯಲ್ಲಿ ಪ್ರಕರಣ ದಾಖಲಿಸಿದೆ. ಆರೋಪಿಗಳನ್ನು ಪತ್ತೆಹಚ್ಚಲು ಪೊಲೀಸರು ತನಿಖೆ ಆರಂಭಿಸಿದ್ದಾರೆ. ಇನ್ನು ಈ ವಂಚನೆಗಾಗಿ ಎಐ ವಿಡಿಯೋವನ್ನು ಬಳಸಿಕೊಂಡಿದ್ದಾರೆ ಎಂದು ಹೇಳಲಾಗಿದೆ. ಡೇಟಿಂಗ್ ಅಪ್ಲಿಕೇಶನ್‌ಗಳಿಗೆ ಸಂಬಂಧಿಸಿದ ಲೈಂಗಿಕ ಕಿರುಕುಳ ಪ್ರಕರಣಗಳು ಹೆಚ್ಚುತ್ತಿವೆ ಮತ್ತು ಆನ್‌ಲೈನ್‌ನಲ್ಲಿ ಅಪರಿಚಿತರೊಂದಿಗೆ ಸಂವಹನ ನಡೆಸುವಾಗ ಬಳಕೆದಾರರು ಜಾಗರೂಕರಾಗಿರಬೇಕು ಎಂದು ಈ ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ.

# ಹಿಟ್ ಆ್ಯಂಡ್ ರನ್‌ಗೆ ಬೈಕ್ ಸವಾರ ಬಲಿ

**ಬೆಂಗಳೂರು ಗ್ರಾಮಾಂತರ:**ನೆಲಮಂಗಲ ತಾಲೂಕಿನ ತೊಣಚಿನಕುಪ್ಪೆ ಗ್ರಾಮದ ಬಳಿ ಸಂಭವಿಸಿದ ಹಿಟ್ ಅಂಡ್ ರನ್ ಪ್ರಕರಣದಲ್ಲಿ ಬೈಕ್ ಸವಾರನೊಬ್ಬ ಪ್ರಾಣ ಕಳೆದುಕೊಂಡಿರುವ ದುರ್ಘಟನೆ ನಡೆದಿದೆ. ಅಪರಿಚಿತ ವಾಹನದ ಡಿಕ್ಕಿಯಿಂದ ಗಂಭೀರವಾಗಿ ಗಾಯಗೊಂಡ ಮಧುಸೂದನ್ (21) ಸ್ಥಳದಲ್ಲೇ ಮೃತಪಟ್ಟಿದ್ದಾನೆ.

ಮೃತ ಮಧುಸೂದನ್ ಮಾಗಡಿ ತಾಲೂಕಿನ ವೀರಸಾಗರ ಗ್ರಾಮದ ನಿವಾಸಿಯಾಗಿದ್ದು, ವೈಯಕ್ತಿಕ ಕೆಲಸದ ನಿಮಿತ್ತ ಬೈಕ್‌ನಲ್ಲಿ ಸಂಚರಿಸುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿದುಬಂದಿದೆ. ಅಪಘಾತ ಸಂಭವಿಸಿದ ನಂತರ ಡಿಕ್ಕಿ ಹೊಡೆದ ವಾಹನ ಚಾಲಕ ಯಾವುದೇ ಸಹಾಯ ಮಾಡದೇ ಸ್ಥಳದಿಂದ ಪರಾರಿಯಾಗಿದ್ದಾನೆ ಎಂಬ ಆರೋಪ ಕೇಳಿಬಂದಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.